ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಸೋಮವಾರ, ದಿನಾಂಕ : 22ನೇ ಜುಲೈ, 2019

ರಾಜ್ಯದಲ್ಲಿ ಉತ್ಪಾದನೆಯಾಗುವ ಕೃಷಿ ಉತ್ಪನ್ನಗಳಿಗೆ ಬೇಕಾಗುವಷ್ಟು ದಾಸ್ತಾನು (Godown) ಅನುಕೂಲತೆ ಇರದಿರುವ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

443 (658) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ರೈತರು ಉತ್ಪಾದಿಸುವ ಉತ್ಪನ್ನಗಳನ್ನು ಸಂಗ್ರಹಿಸಿಡಲು ಇರುವ ಗೋದಾಮುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯ ಉಗ್ರಾಣ ನಿಗಮದಿಂದ ನಡೆಸಲ್ಪಡುವ ಒಟ್ಟು ಉಗ್ರಾಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಸಂಗ್ರಹಣೆ ಸಾಮರ್ಥ್ಯಗಳ ವಿವರಗಳ ಮಾಹಿತಿ ನೀಡುವುದು)

(ಇ) ರಾಜ್ಯ ಉಗ್ರಾಣ ನಿಗಮದಡಿಯಲ್ಲಿ ಬರುವ ಗೋದಾಮುಗಳ ಒಟ್ಟು ಸಂಖ್ಯೆಯಲ್ಲಿ ಹಲವಾರು ಉಗ್ರಾಣಗಳಲ್ಲಿ ಅವಶ್ಯಕ ಸೌಲಭ್ಯ ಹಾಗೂ ಧಾನ್ಯಗಳ ರಕ್ಷಣೆಗೆ ಅನುಕೂಲತೆಗಳಿರುವ ಹಿನ್ನೆಲೆಯಲ್ಲಿ ದಾಸ್ತಾನುಗಳು ಕೆಟ್ಟುಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಉಗ್ರಾಣಗಳಲ್ಲಿ ಈ ತರಹದ ಸಮಸ್ಯೆಗಳ ನಿವಾರಣೆಗೆ ಸರ್ಕಾರದ ತೆಗೆದುಕೊಂಡ ಕ್ರಮಗಳೇನು ?